**Akashvani : Bangalore**
**Regional Bulletin In Kannada**
**14.08.2026 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**14.08.2026 / 18.40 hrs**

**<><*<><>*><>**

ಮುಖ್ಯಾಂಶಗಳು

**೧. ನಾಳೆ ೮೦ನೇ ಸ್ವಾತಂತ್ರ್ಯ ದಿನಾಚರಣೆ ; ಮಾಣೆಕ್ ಷಾ ಪರೇಡ್ ಮೈದಾನದಲ್ಲಿ ಮುಖ್ಯಮಂತ್ರಿ ಧ್ವಜಾರೋಹಣ ; ಬೆಂಗಳೂರಿನಲ್ಲಿ ಬಿಗಿ ಭದ್ರತೆ**

**೨. ರಾಜ್ಯದಲ್ಲಿ ಗುಟ್ಕಾ ನಿಷೇಧ ಆದೇಶ ಹಿಂಪಡೆಯಲು ಸರ್ಕಾರ ನಿರ್ಧಾರ**

**೩. ಪರಿಷತ್‌ನಲ್ಲಿ ಬಿಡದಿ ಟೌನ್‌ಶಿಪ್ ಯೋಜನೆ ಸಮರ್ಥಿಸಿಕೊಂಡ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್**

**೪. ತಾತ್ಕಾಲಿಕವಾಗಿ ಬಿಪಿಎಲ್ ಕಾರ್ಡ್ ಪರಿಷ್ಕರಣೆ ರದ್ದುಗೊಳಿಸಲು ನಿರ್ಧಾರ ; ಆಹಾರ ಖಾತೆ ಸಚಿವ ರಿಜ್ವಾನ್ ಅರ್ಷದ್ ಸ್ಪಷ್ಟನೆ**

**೫. ಎರಡು ಸಾವಿರದ ೧೧೦ ಕೋಟಿ ರೂಪಾಯಿ ಹಗರಣ ; ಆರೋಪಿ ಶಿವಾನಂದ್ ನೀಲಣ್ಣವರ್ ಬಂಧಿಸಿದ ಇಡಿ**

**<><*<><>*><>**

೮೦ನೇ ಸ್ವಾತಂತ್ರ್ಯ ದಿನಾಚರಣೆ ಹಿನ್ನೆಲೆಯಲ್ಲಿ ಬೆಂಗಳೂರಿನ ಮಾಣೆಕ್ ಷಾ ಪರೇಡ್ ಮೈದಾನದಲ್ಲಿ ನಾಳೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಧ್ವಜಾರೋಹಣ ನೆರವೇರಿಸಲಿದ್ದಾರೆ. ಈ ಹಿನ್ನೆಲೆಯಲ್ಲಿ ಬೆಂಗಳೂರು ನಗರದಾದ್ಯಂತ ಭದ್ರತಾ ವ್ಯವಸ್ಥೆ ಹೆಚ್ಚಿಸಲಾಗಿದೆ. ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ. ಮೈದಾನದ ಹೊರಗೆ ಮತ್ತು ಒಳಗೆ ೧೧೦ ಸಿಸಿ ಕ್ಯಾಮೆರಾ ಅಳವಡಿಸಲಾಗಿದೆ. ೧ ಸಾವಿರದ ನೂರು ಪೊಲೀಸ್ ಅಧಿಕಾರಿಗಳನ್ನು ಹಾಗೂ ಸಿಬ್ಬಂದಿ ನಿಯೋಜಿಸಲಾಗಿದೆ. ಸುಗಮ ಸಂಚಾರ ನಿರ್ವಹಣೆಗಾಗಿ ಒಂದು ಸಾವಿರದ ೫೮೩ ಅಧಿಕಾರಿಗಳನ್ನು ನೇಮಕ ಮಾಡಲಾಗಿದೆ. ಮಾಣೆಕ್ ಷಾ ಪರೇಡ್ ಮೈದಾನಕ್ಕೆ ಸಿಗರೇಟ್, ಬೆಂಕಿಪೊಟ್ಟಣ, ಚೂಪಾದ ವಸ್ತುಗಳು, ಚಾಕು ಮತ್ತು ಬ್ಲೇಡ್‌ಗಳು, ಸ್ಫೋಟಕ ವಸ್ತುಗಳು ನಿಷೇಧಿಸಲಾಗಿದೆ. ಇದರ ಜೊತೆಗೆ ಸ್ವಾತಂತ್ರ್ಯ ದಿನಾಚರಣೆಯ

ಅಂಗವಾಗಿ ಬೆಂಗಳೂರಿನಲ್ಲಿ ಫ್ರೀಡಂ ಹಬ್ಬ ನಡೆಯಲಿದ್ದು, ಎಲ್ಲಾ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ. ಕಾರ್ಯಕ್ರಮವನ್ನು ಸಾರ್ವಜನಿಕರಿಗಾಗಿ ವಿಧಾನಸೌಧದ ಭವ್ಯ ಮೆಟ್ಟಿಲುಗಳ ಮೇಲೆ ಆಯೋಜಿಸಲಾಗಿದೆ. ಮುನ್ನೆಚ್ಚರಿಕಾ ಕ್ರಮವಾಗಿ ೩ ಸಾವಿರಕ್ಕೂ ಹೆಚ್ಚು ಪೊಲೀಸರನ್ನು ನಿಯೋಜಿಸಲಾಗಿದೆ.

<><*<><>*><>

ತೀವ್ರ ವಿರೋಧದ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ಗುಟ್ಕಾ ನಿಷೇಧವನ್ನು ಹಿಂತೆಗೆದುಕೊಳ್ಳಲಿದೆ ಎಂದು ಐಎಎನ್ಎಸ್ ಸಂಸ್ಥೆ ವರದಿ ಮಾಡಿದೆ. ರಾಜ್ಯದ ಹಲವು ಜಿಲ್ಲೆಗಳಲ್ಲಿ ಅಡಿಕೆ ಬೆಳೆಗಾರರ ಮೇಲೆ ಪರಿಣಾಮ ಉಂಟಾಗಲಿದೆ ಎಂದು ಶಾಸಕರು ಪಕ್ಷಾತೀತವಾಗಿ ಕಳವಳ ವ್ಯಕ್ತಪಡಿಸಿದ ಬಳಿಕ ಸರ್ಕಾರ ನಿಷೇಧವನ್ನು ಹಿಂತೆಗೆದುಕೊಳ್ಳಲು ನಿರ್ಧರಿಸಿದೆ. ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ರಾಜ್ಯದಲ್ಲಿ ಗುಟ್ಕಾ ನಿಷೇಧಿಸುವ ಆದೇಶವನ್ನು ಹಿಂತೆಗೆದುಕೊಳ್ಳುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ. ನಿನ್ನೆ ನಡೆದ ಸಚಿವ ಸಂಪುಟದಲ್ಲಿ ಈ ವಿಷಯ ಚರ್ಚೆಗೆ ಬಂದಿದ್ದು, ಆರೋಗ್ಯ ಇಲಾಖೆ ಕಾರ್ಯದರ್ಶಿ ವಿರುದ್ಧ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

<><*<><>*><>

ಬಿಡದಿ ಟೌನ್‌ಶಿಪ್ ಯೋಜನೆ ಉತ್ತಮ ಯೋಜನೆಯಾಗಿದೆ ಎಂದು ವಿಧಾನ ಪರಿಷತ್‌ನಲ್ಲಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸಮರ್ಥಿಸಿಕೊಂಡಿದ್ದಾರೆ. ಕೆಲವು ಒತ್ತಡಗಳಿಂದ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ, ರಾಜಕೀಯ ಮಾಡುತ್ತಿದ್ದಾರೆ ಎಂದು ಅಭಿಪ್ರಾಯಪಟ್ಟಿದ್ದಾರೆ. ವಿಧಾನಪರಿಷತ್‌ನಲ್ಲಿ ಸಭಾಪತಿ ಸಲೀಂ ಅಹಮ್ಮದ್ ಅವರನ್ನು ಅಭಿನಂದಿಸಿ, ಮಾತನಾಡಿದ ಮುಖ್ಯಮಂತ್ರಿ ಜೀವನದಲ್ಲಿ ಯಶಸ್ಸು ಸಿಗಬೇಕಾದರೆ ಧರ್ಮರಾಯನ ಧರ್ಮತ್ವ, ಕರ್ಣನ ದಾನತ್ವ, ಅರ್ಜುನನ ಗುರಿ ಇರಬೇಕೆಂದು ತಿಳಿಸಿದ್ದಾರೆ. ರಾಜಕಾರಣ ಹೊರಗಿಟ್ಟು, ರಾಜ್ಯದ ಯಶಸ್ಸಿಗೆ ಒಟ್ಟಾಗಿ ಕಾರ್ಯ ನಿರ್ವಹಿಸೋಣ ಎಂದು ಕರೆ ನೀಡಿದ್ದಾರೆ. ನೂತನ ಸಭಾಪತಿ ಸಲೀಂ ಅಹಮ್ಮದ್ ಮಾತನಾಡಿ, ಈ ಹಂತದವರೆಗೆ ಬರಲು ಅವಕಾಶ ಕಲ್ಪಿಸಿದ ಕಾಂಗ್ರೆಸ್ ಪಕ್ಷ ಹಾಗೂ ಹಿರಿಯ ನಾಯಕರಿಗೆ ಧನ್ಯವಾದ ತಿಳಿಸಿದರು. ಇದು ಪಕ್ಷದ ಸ್ಥಾನವಲ್ಲ, ಸದನದ ಸ್ಥಾನ ಎಂದು ಅಭಿಪ್ರಾಯಪಟ್ಟ ಅವರು, ಇಲ್ಲಿ ಎಲ್ಲರೂ ಸಮಾನರು ಎಂದು ಹೇಳಿದರು. ಬಳಿಕ ವಿಧಾನಪರಿಷತ್ತಿನ ಕಾರ್ಯಕಲಾಪವನ್ನು ಸೋಮವಾರ ೧೧ ಗಂಟೆಗೆ ಸಭಾಪತಿ ಸಲೀಂ ಅಹಮ್ಮದ್ ಮುಂದೂಡಿದರು.

<><*<><>*><>

ತಾತ್ಕಾಲಿಕವಾಗಿ ಬಿಪಿಎಲ್ ಕಾರ್ಡ್ ಪರಿಷ್ಕರಣೆ ರದ್ದುಗೊಳಿಸಲು ನಿರ್ಧರಿಸಲಾಗಿದೆ ಎಂದು ಆಹಾರ ಖಾತೆ ಸಚಿವ ರಿಜ್ವಾನ್ ಅರ್ಷದ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಎರಡು ಕೋಟಿ ೬೫ ಲಕ್ಷ ಕಾರ್ಡ್‌ಗಳು ಇ-ಕೆವೈಸಿ ಆಗಬೇಕಿದೆ ಎಂದು ಹೇಳಿದ್ದಾರೆ. ಸೆಪ್ಟೆಂಬರ್ ತಿಂಗಳೊಳಗೆ ಇ-ಕೆವೈಸಿ ಮಾಡಲು ನಿರ್ಧರಿಸಿದ್ದು, ಬಳಿಕ ಅಂತಿಮ ನಿರ್ಧಾರ ಕೈಗೊಳ್ಳಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ. ಇಂದಿರಾ ಕಿಟ್ ನೀಡಲು ತಾಂತ್ರಿಕ ತೊಂದರೆ ಉಂಟಾಗಿದೆ ಎಂದು ತಿಳಿಸಿದ ಸಚಿವರು, ಅಂತಿಮ ನಿರ್ಧಾರ ಇನ್ನು ಕೈಗೊಂಡಿಲ್ಲ ಎಂದು ಹೇಳಿದ್ದಾರೆ.

**<><*<><>*><>**

ಚಿಕ್ಕಮಗಳೂರು ಜಿಲ್ಲೆಯ ಕುದುರೆಮುಖ ಪರಿಸರದಲ್ಲಿ ನಾಳೆ ಮತ್ತು ನಾಡಿದ್ದು ಬೆಂಗಳೂರಿನ ಖಾಸಗಿ ಕಂಪನಿಯೊಂದು ವಾಹನಗಳ ಆಫ್ ರೋಡ್ ಸಾಹಸ ಯಾತ್ರೆ ರ್‍ಯಾಲಿ ಆಯೋಜನೆ ಮಾಡಿದೆ. ಇಂತಹ ಯಾವುದೇ ಕಾರ್ಯಕ್ರಮಗಳನ್ನು ನಡೆಸಲು ಅನುಮತಿ ನೀಡದಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ್ ಬಿ ಖಂಡ್ರೆ ಜಿಲ್ಲಾಡಳಿತಕ್ಕೆ ಸೂಚನೆ ನೀಡಿದ್ದಾರೆ. ಚಿಕ್ಕಮಗಳೂರು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಅವರಿಗೆ ಪತ್ರದ ಮೂಲಕ ಸೂಚನೆ ನೀಡಿರುವ ಅವರು ಕಾರ್ಯಕ್ರಮ ನಡೆಸಿದ್ದಲ್ಲಿ ಕಾನೂನು ಕ್ರಮ ಜರುಗಿಸುವಂತೆ ನಿರ್ದೇಶನ ನೀಡಿದ್ದಾರೆ. ಜೀಪ್‌ಗಳ ಸಂಚಾರದಿಂದ ಕುದುರೆಮುಖದ ಪರಿಸರಕ್ಕೆ, ಗ್ರಾಮೀಣ ಭಾಗದ ರಸ್ತೆಗಳಿಗೆ ಹಾನಿಯುಂಟಾಗಲಿದೆ. ಶಬ್ದ ಮಾಲಿನ್ಯ ವಾಯು ಮಾಲಿನ್ಯದ ಜೊತೆಗೆ ಸಣ್ಣ ಜಲ ಹಳ್ಳದಂತ ನೀರಿನ ಮೂಲಗಳು ಕಲುಷಿತಗೊಳ್ಳುತ್ತವೆ ಎಂದು ತಿಳಿಸಿದ್ದಾರೆ. ಕಾರ್ಯಕ್ರಮ ನಡೆಸಿದ್ದಲ್ಲಿ ಆಯೋಜಕರ ಮೇಲೆ ಕಟ್ಟುನಿಟ್ಟಿನ ಕ್ರಮ ಜರುಗಿಸಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

**<><*<><>*><>**

೮೦ನೇ ಸ್ವಾತಂತ್ರ್ಯ ದಿನಾಚರಣೆಯ ಹಿನ್ನೆಲೆಯಲ್ಲಿ ಆಕಾಶವಾಣಿ ಬೆಂಗಳೂರು ಕೇಂದ್ರದ ಮುಖ್ಯ ವಾಹಿನಿಯಿಂದ ನಾಳೆ ಬೆಳಗ್ಗೆ ೧೦ ಗಂಟೆ ೩೦ ನಿಮಿಷದಿಂದ ೧೧ ಗಂಟೆ ೩೦ ನಿಮಿಷದವರೆಗೆ 'ಫ್ರೀಡಂ ರಿದಮ್ ಎ ಸಿಂಫೊನಿ ಆಫ್ ಫ್ರೀಡಂ' ಕುರಿತ ಸಂಗೀತ ಕಾರ್ಯಕ್ರಮ ನೇರ ಪ್ರಸಾರವಾಗಲಿದೆ.

**<><*<><>*><>**

ಎರಡು ಸಾವಿರದ ೧೧೦ ಕೋಟಿ ರೂಪಾಯಿಗಳ ಹಗರಣದಲ್ಲಿ ಶಿವಂ ಅಸೋಸಿಯೇಟ್ಸ್‌ನ ಶಿವಾನಂದ್ ಸಿದ್ದಪ್ಪ ನೀಲಣ್ಣವರ್ ಅವರನ್ನು ಬಂಧಿಸಲಾಗಿದೆ ಎಂದು ಜಾರಿ ನಿರ್ದೇಶನಾಲಯ ತಿಳಿಸಿದೆ. ಮಂಗಳೂರು ವಲಯ ಇಡಿ ಅಧಿಕಾರಿಗಳು ಬಂಧಿಸಿದ್ದು, ವಿಶೇಷ ನ್ಯಾಯಾಲಯ ಆರೋಪಿಯನ್ನು ಇದೇ ೨೪ರವರೆಗೆ ಕಸ್ಟಡಿಗೆ ನೀಡಿ ಆದೇಶ ಹೊರಡಿಸಿದೆ. ಶಿವಾನಂದ, ಕರ್ನಾಟಕ ಮಾತ್ರವಲ್ಲದೇ ಮಹಾರಾಷ್ಟ್ರ, ಗೋವಾ, ಚತ್ತೀಸ್‌ಗಢ ರಾಜ್ಯದಲ್ಲೂ ಹೂಡಿಕೆ ಸಂಗ್ರಹ ಮಾಡಿದ್ದಾನೆ. ಪೊಂಜಿ ಶೈಲಿ ಸ್ಕೀಮ್ ಮೂಲಕ ಎರಡು ಸಾವಿರದ ೧೧೦ ಕೋಟಿ ರೂಪಾಯಿ ಅಕ್ರಮವಾಗಿ ಸಂಗ್ರಹಿಸಿದ್ದಾನೆ. ಆದರೆ ಒಂದು ಭಾಗದಷ್ಟು ಹಣ ಮಾತ್ರ ಮರುಪಾವತಿ ಮಾಡಲಾಗಿದೆ. ದುರುಪಯೋಗ ಪಡಿಸಿಕೊಂಡ ಹಣವನ್ನು ಪಿಎಂಎಲ್‌ಎ ಅಡಿಯಲ್ಲಿ ಅಪರಾಧದ ಆದಾಯ ಎಂದು ಗುರುತಿಸಲಾಗಿದೆ.

<><*<><>*><>

ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ಆಗಸ್ಟ್ ೯ ರಿಂದ ೧೭ರವರೆಗೆ ದೇಶಾದ್ಯಂತ "ಹರ್ ಘರ್ ತಿರಂಗಾ-೨೦೨೫" ಅಭಿಯಾನ ಹಮ್ಮಿಕೊಳ್ಳಲಾಗಿದೆ. ಕೊಪ್ಪಳ ಜಿಲ್ಲೆಯಲ್ಲಿ ಯಶಸ್ವಿಯಾಗಿ ಅನುಷ್ಠಾನಗೊಳಿಸಲು ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲು ಅಗತ್ಯ ಕ್ರಮ ಕೈಗೊಳ್ಳಲಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ ತಿಳಿಸಿದ್ದಾರೆ. ಗದಗ ಜಿಲ್ಲೆಯ ನಾಗಾವಿ ಗ್ರಾಮದಲ್ಲಿರುವ ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ರಾಷ್ಟ್ರೀಯ ಸೇವಾ ಯೋಜನೆಯ ಕೋಶದ ವತಿಯಿಂದ ಮಲ್ಲಸಮುದ್ರ ಗ್ರಾಮದಲ್ಲಿ 'ಹರ್ ಘರ್ ತಿರಂಗಾ' ಅಭಿಯಾನ ನಡೆಯಿತು. ತುಮಕೂರಿನಲ್ಲಿ ನಡೆದ ತಿರಂಗಾ ಯಾತ್ರೆಯಲ್ಲಿ ಕಾಲೇಜು ವಿದ್ಯಾರ್ಥಿಗಳು, ಎನ್‌ಸಿಸಿ ಹಾಗೂ ಸ್ಕೌಟ್ ವಿದ್ಯಾರ್ಥಿಗಳು ಸೇರಿದಂತೆ ನೂರಾರು ಮಂದಿ ಉತ್ಸಾಹದಿಂದ ಭಾಗವಹಿಸಿದರು. ಮಹಾನಗರ ಪಾಲಿಕೆ ಆವರಣದಲ್ಲಿ ವಿದ್ಯಾರ್ಥಿಗಳು ಹಾಗೂ ನಾಗರಿಕರು ೧೦೦ ಮೀಟರ್ ಉದ್ದದ ಬೃಹತ್ ರಾಷ್ಟ್ರಧ್ವಜ ಹಾಗೂ ಸಹಸ್ರಾರು ತ್ರಿವರ್ಣ ಧ್ವಜಗಳನ್ನು ಹಿಡಿದು ಮೆರವಣಿಗೆ ನಡೆಸಿದರು.

<><*<><>*><>

ಕಲಬುರಗಿ ಲೋಕಸಭಾ ಕ್ಷೇತ್ರದ ಸಂಸದ ರಾಧಾಕೃಷ್ಣ ದೊಡ್ಡಮನಿ ನವದೆಹಲಿಯಲ್ಲಿಂದು ಭಾರತೀಯ ಪುರಾತತ್ವ ಸರ್ವೇಕ್ಷಣೆ ಮಹಾನಿರ್ದೇಶಕ ಯದುಬೀರ್ ಸಿಂಗ್ ರಾವತ್ ಹಾಗೂ ಹೆಚ್ಚುವರಿ ಮಹಾನಿರ್ದೇಶಕ ಜಾನ್ವಿಜ್ ಶರ್ಮಾ ಅವರನ್ನು ಭೇಟಿಯಾಗಿ ಚರ್ಚೆ ನಡೆಸಿದರು. ಸಭೆಯಲ್ಲಿ ಕಲಬುರಗಿ ಜಿಲ್ಲೆಯ ಐತಿಹಾಸಿಕ ಬೌದ್ಧ ತಾಣವಾದ 'ಸನ್ನತಿ' ಹಾಗೂ ಪ್ರಸಿದ್ಧ 'ಗುಲ್ಬರ್ಗ ಕೋಟೆ'ಯ ಸಂರಕ್ಷಣೆ, ಜೀರ್ಣೋದ್ಧಾರ ಮತ್ತು ಸಮಗ್ರ ಅಭಿವೃದ್ಧಿ ಕುರಿತು ಸಮಾಲೋಚನೆ

ನಡೆಸಿದ್ದಾರೆ. ಈ ಭಾಗದ ಐತಿಹಾಸಿಕ ಮತ್ತು ಸಾಂಸ್ಕೃತಿಕ ಮಹತ್ವವನ್ನು ಹೊಂದಿರುವ ಪಾರಂಪರಿಕ ತಾಣಗಳನ್ನು ಕಾಲಮಿತಿಯಲ್ಲಿ ಸಂರಕ್ಷಿಸಿ ಅಭಿವೃದ್ಧಿಪಡಿಸುವ ಅಗತ್ಯವನ್ನು ಸಂರಕ್ಷಣೆ ದೃಷ್ಟಿಯಿಂದ ಪ್ರತಿಪಾದಿಸಿದ್ದಾರೆ. ಸಂಸದರ ಮನವಿಗೆ ಧನಾತ್ಮಕವಾಗಿ ಸ್ಪಂದಿಸಿದ ಅಧಿಕಾರಿಗಳು, ಸೂಕ್ತ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದ್ದಾರೆ.

<><*<><>*><>

ಕೃಷಿ ಉತ್ಪನ್ನಗಳ ಮೌಲ್ಯವರ್ಧನೆ, ಕೊಯ್ಲಿನ ನಂತರದ ನಷ್ಟ ತಡೆಯುವುದು ಹಾಗೂ ರೈತರ ಆದಾಯ ಹೆಚ್ಚಿಸುವ ಉದ್ದೇಶದಿಂದ ಜಾರಿಗೆ ತರಲಾಗಿರುವ 'ಪ್ರಧಾನ ಮಂತ್ರಿ ಕಿಸಾನ್ ಸಂಪದ ಯೋಜನೆ' ಹಾಗೂ ಎಪಿಇಡಿಎ ಯೋಜನೆಗಳ ಅಡಿಯಲ್ಲಿ ದಾವಣಗೆರೆ ಜಿಲ್ಲೆಯ ಆಹಾರ ಸಂಸ್ಕರಣಾ ಘಟಕಕ್ಕೆ ಹಣಕಾಸಿನ ನೆರವು ಮಂಜೂರಾಗಿದೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ. ದಾವಣಗೆರೆ ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ಲೋಕಸಭೆಯಲ್ಲಿ ಕೇಳಿದ್ದ ಪ್ರಶ್ನೆಗೆ ಕೇಂದ್ರ ಆಹಾರ ಸಂಸ್ಕರಣಾ ಕೈಗಾರಿಕೆಗಳ ಸಚಿವ ಚಿರಾಗ್ ಪಾಸ್ವಾನ್ ಲಿಖಿತ ಉತ್ತರ ನೀಡಿದ್ದಾರೆ. ಎಪಿಇಡಿಎ ಯೋಜನೆಯಡಿ ಆರ್ಥಿಕ ನೆರವು ಕೋರಿ ಕರ್ನಾಟಕದಿಂದ ಸಲ್ಲಿಕೆಯಾಗಿದ್ದ ೧೧ ಅರ್ಜಿಗಳಲ್ಲಿ ೭ ಯೋಜನೆಗಳಿಗೆ ಮಂಜೂರಾತಿ ದೊರೆತಿದ್ದು, ಅದರಲ್ಲಿ ದಾವಣಗೆರೆಯ ಸಂಸ್ಥೆಯೂ ಸೇರಿದೆ ಎಂದು ಸಚಿವ ಚಿರಾಗ್ ಪಾಸ್ವಾನ್ ತಿಳಿಸಿದ್ದಾರೆ.

<><*<><>*><>

**ಸಂಕ್ಷಿಪ್ತ ಸುದ್ದಿಗಳು**

೧. ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ ಭವನದ ಆವರಣದ ಮುಂಭಾಗದಲ್ಲಿ ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ ಪುತ್ಥಳಿ ನಿರ್ಮಾಣಕ್ಕೆ ಸಮಾಜ ಕಲ್ಯಾಣ ಇಲಾಖೆ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಕೆ.ಹೆಚ್.ಮುನಿಯಪ್ಪ ಭೂಮಿ ಪೂಜೆ ನೆರವೇರಿಸಿದರು.

೨. ಹಾವೇರಿ ಜಿಲ್ಲೆಯಲ್ಲಿ ೨೦೨೬ರ ಆಗಸ್ಟ್ ಮತ್ತು ಸೆಪ್ಟೆಂಬರ್ ತಿಂಗಳ ಪಡಿತರ ಆಹಾರ ಧಾನ್ಯವನ್ನು ಬಿಡುಗಡೆ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿ ವಿಜಯ ಮಹಾಂತೇಶ ದಾನಮ್ಮನವರ ತಿಳಿಸಿದ್ದಾರೆ.

೩. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಸಾರ್ವಜನಿಕ ಆಹಾರ ವಿತರಣಾ ವ್ಯವಸ್ಥೆಯಲ್ಲಿ ಮಕ್ಕಳಿಗೆ, ಮಹಿಳೆಯರಿಗೆ ದುರ್ಬಲರಿಗೆ, ಹಿರಿಯರಿಗೆ ಯಾವುದೇ ರೀತಿಯ ಲೋಪದೋಷ

ಕಂಡು ಬಂದಲ್ಲಿ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲಾಗುವುದೆಂದು ಕರ್ನಾಟಕ ರಾಜ್ಯ ಆಹಾರ ಆಯೋಗದ ಅಧ್ಯಕ್ಷರಾದ ಡಾ.ಹೆಚ್.ಕೃಷ್ಣ ತಿಳಿಸಿದ್ದಾರೆ.

೪. ಸ್ವಚ್ಛ ಭಾರತ್ ಮಿಷನ್ ಕಾರ್ಯಕ್ರಮದಡಿ ೭೦ನೇ ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ 'ಸ್ವಚ್ಛ ಸ್ವಾತಂತ್ರ್ಯೋತ್ಸವ' ಘೋಷವಾಕ್ಯದೊಂದಿಗೆ ಮಂಡ್ಯ ನಗರಸಭೆ ವತಿಯಿಂದ ಸ್ವಚ್ಛತಾ ಡ್ರೈವ್ ಹಮ್ಮಿಕೊಳ್ಳಲಾಗಿದೆ ಎಂದು ನಗರಸಭೆ ಆಯುಕ್ತ ಯು.ಪಿ.ಪಂಪಶ್ರೀ ಮಾಹಿತಿ ನೀಡಿದ್ದಾರೆ.

೫. ಗ್ರಾಮೀಣ ಕುಟುಂಬಗಳಿಗೆ ಉದ್ಯೋಗಾವಕಾಶ ಕಲ್ಪಿಸುವ ಉದ್ದೇಶದಿಂದ ನಾಳೆಯಿಂದ ಸೆಪ್ಟೆಂಬರ್ ೧೫ರವರೆಗೆ ಎಲ್ಲಾ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ 'ಜಾಬ್ ಕಾರ್ಡ್ ಮೇಳ' ಅಭಿಯಾನ ಜರುಗಲಿದೆ ಎಂದು ಗದಗ ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿ ಸಿ.ಆರ್. ಮುಂಡರಗಿ ತಿಳಿಸಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**